ಎಚ್. ಕೆ. ಪಾಟೀಲ
ಕಾನೂನು, ಸಂಸದೀಯ ವ್ಯವಹಾರಗಳು
ಮತ್ತು ಪ್ರವಾಸೋದ್ಯಮ ಇಲಾಖೆ
ಸಚಿವರು

ಕೊಠಡಿ ಸಂಖ್ಯೆ 314, 314ಎ, 3ನೇ ಮಹಡಿ,
ವಿಧಾನಸೌಧ, ಬೆಂಗಳೂರು - 560 001

ದಿನಾಂಕ

ಕ್ರ.ಸಂ:ಕಾಸಂವ್ಯಪ್ರಸ/ /2024

ದಿನಾಂಕ: 22.04.2024

# ಟಿಪ್ಪಣಿ

ಹುಬ್ಬಳ್ಳಿಯಲ್ಲಿ ನಡೆದ ಕುಮಾರಿ.ನೇಹಾ ಹಿರೇಮಠ ರವರ ಹೀನಾಯ ಹತ್ಯೆ ಪ್ರಕರಣದಲ್ಲಿ ಕರ್ನಾಟಕ ಸರ್ಕಾರವು ಪ್ರಕರಣದಲ್ಲಿ ದಾಖಲಾಗಿರುವ ಪ್ರಥಮ ವರ್ತಮಾನ ವರದಿಯ ಆಧಾರದ ಮೇಲೆ ಮತ್ತು ಪ್ರಕರಣದ ಕುರಿತು ಸಾರ್ವಜನಿಕ ಆಕ್ರೋಶ ವ್ಯಕ್ತವಾಗಿರುವ ಹಿನ್ನೆಲೆಯಲ್ಲಿ ಸರ್ಕಾರವು ಪ್ರಸ್ತುತ ಪ್ರಕರಣದ ವಿಚಾರಣೆಗೆ ಒಂದು ವಿಶೇಷ ನ್ಯಾಯಾಲಯವನ್ನು ಸ್ಥಾಪಿಸುವ ಕುರಿತು ಇಂದು ಸನ್ಮಾನ್ಯ ಮುಖ್ಯಮಂತ್ರಿಯವರೊಂದಿಗೆ ಚರ್ಚಿಸಿದ್ದೇನೆ. ಈ ಹಿನ್ನೆಲೆಯಲ್ಲಿ ವಿಶೇಷ ನ್ಯಾಯಾಲಯವನ್ನು ಸ್ಥಾಪಿಸಲು ಸರ್ಕಾರವು ಉದ್ದೇಶಿಸಿದೆ.

1. ಸರ್ವೋಚ್ಚ ನ್ಯಾಯಾಲಯವು ಮಹಿಳೆಯರ ವಿರುದ್ಧದ ಹೀನಾಯ ಅಪರಾಧ ಪ್ರಕರಣಗಳಲ್ಲಿ ನೀಡಿರುವ ಮಾರ್ಗದರ್ಶನಗಳನ್ನು ಕೂಲಂಕುಷವಾಗಿ ಪರಿಶೀಲಿಸಿ, ಹಾಗೂ ಅಪರಾಧ ಪ್ರಕ್ರಿಯಾ ಸಂಹಿತೆ ಮತ್ತು ಭಾರತೀಯ ದಂಡ ಸಂಹಿತೆಗೆ ಮಾಡಲಾಗಿರುವ ತಿದ್ದುಪಡಿಗಳನ್ನು ಸರ್ಕಾರವು ಗಂಭೀರವಾಗಿ ಗಮನಿಸಿದೆ.
2. ಬರ್ಬರ ಹತ್ಯೆ ಹಿನ್ನೆಲೆಯಲ್ಲಿ ಈ ಪ್ರಕರಣವು ಜನಮಾನಸದ ನೆನಪಿನ ಆಳದಿಂದ ಮಾಸುವ ಮೊದಲೇ ಅಪರಾಧಿಗೆ ಶಿಕ್ಷೆಯಾಗಬೇಕೆಂಬ ಹಿನ್ನೆಲೆಯಲ್ಲಿ ಸಾಮಾಜಿಕ ಪರಿಣಾಮಗಳನ್ನು ಪರಿಗಣಿಸಿ, ಕುಮಾರಿ.ನೇಹಾ ಹಿರೇಮಠ ಪ್ರಕರಣವು ಸಾಮಾಜಿಕ ಮತ್ತು ವಿದ್ಯಾರ್ಥಿಗಳ ಮೇಲೆ ತೀವ್ರ ಪರಿಣಾಮ ಬೀರುವಂತಾದ್ದಾಗಿರುತ್ತದೆ. ಆದಕಾರಣ ಒಂದು ವಿಶೇಷ ನ್ಯಾಯಾಲಯದ ಅವಶ್ಯಕತೆಯನ್ನು ಸರ್ಕಾರವು ಮನಗಂಡಿದೆ.

ಈ ಹಿನ್ನೆಲೆಗಳಲ್ಲಿ <u>ಮಹಿಳೆಯ ವಿರುದ್ಧದ ಅಪರಾಧ ಕುರಿತು</u> ವಿಶೇಷ ನ್ಯಾಯಾಲಯವೊಂದನ್ನು ಸ್ಥಾಪಿಸಲು ತಕ್ಷಣ ಅಗತ್ಯ ಕ್ರಮವಿಡುವುದು.

(ಎಚ್.ಕೆ. ಪಾಟೀಲ)

**ಸರ್ಕಾರದ ಪ್ರಧಾನ ಕಾರ್ಯದರ್ಶಿ,**
**ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ,**
**ವಿಧಾನಸೌಧ,**
**ಬೆಂಗಳೂರು.**